ಸಿರಿಕನ್ನಡ

10ನೇ ತರಗತಿ

# ಹಕ್ಕಿ ಹಾರುತಿದೆ ನೋಡಿದಿರಾ ಸಾರಾಂಶ



**********************



ದ.ರಾ.ಬೇಂದ್ರೆಯವರು

$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$$

ಪ್ರಯತ್ನ

ಬಸವರಾಜ.ಟಿ.ಎಂ

ಕನ್ನಡ ಭಾಷಾ ಶಿಕ್ಷಕರು

ಸರ್ಕಾರಿ ಪ್ರೌಢಶಾಲೆ, ರೂಪನಗುಡಿ

ಬಳ್ಳಾರಿ ಪೂರ್ವ ವಲಯ

*******************************************************************

ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ. **1x4=4**

**ಇರುಳಿರುಳಳಿದು ದಿನ ದಿನ ಬೆಳಗೆ**

**ಸುತ್ತಮುತ್ತಲೂ ಮೇಲಕೆ ಕೆಳಗೆ**

**ಗಾವುದ ಗಾವುದ ಗಾವುದ ಮುಂದೆ**

**ಎವೆತೆರೆದಿಕ್ಕುವ ಹೊತ್ತಿನ ಒಳಗೆ**

**ಹಕ್ಕಿ ಹಾರುತಿದೆ ನೋಡಿದಿರಾ**

ಬೇಂದ್ರೆಯವರು ಕಾಲವನ್ನು ಹಾರುವ ಹಕ್ಕಿಗೆ ಹೋಲಿಸಿದ್ದಾರೆ. ಈ ಪದ್ಯದಲ್ಲಿ ಕಾಲದ ವೇಗ–ವಿಸ್ತಾರವನ್ನು ಹೇಳಿದ್ದಾರೆ. ಕಾಲ, ರಾತ್ರಿ ಕಳೆದು ದಿನ ಬೆಳಕಾಗಿ ಪುನಃ ರಾತ್ರಿ – ಬೆಳಗು ಹೀಗೆ ಪುನರಾವರ್ತನೆಯಾಗಿ ಚಲನಾ ಗುಣ ಹೊಂದಿದೆ. ಅದು ಮೇಲೆ, ಕೆಳಗೆ ಸುತ್ತಮುತ್ತ ಎತ್ತೆತ್ತಲೂ ತನ್ನ ಕಬಂಧ ಬಾಹುವನ್ನು ಹರಡಿಕೊಂಡು ವಿಶ್ವವ್ಯಾಪಕವಾಗಿದೆ. ಕಾಲ ಕಣ್ಣು ತೆರೆದು ರೆಪ್ಪೆ ಮುಚ್ಚುವುದರೊಳಗೆ ಗಾವುದ ಗಾವುದ ಗಾವುದ ರೀತಿಯಲ್ಲಿ (12 ಮೈಲು) ವೇಗವಾಗಿ ಹಾರಿಹೋಗುತ್ತಿದೆ. ಇಂತಹ ಹಕ್ಕಿ ಹಾರುವುದನ್ನು (ಕಾಲ ಕಳೆದು) ಹೋಗುವುದನ್ನು ನೀವು ನೋಡಿದಿರಾ ಎಂದು ಕಾಲದ ಚಲನಾಶೀಲ, ವಿಸ್ತಾರ , ವೇಗ ಗುಣಗಳನ್ನು ತಿಳಿಸಿದ್ದಾರೆ.

ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು ಅಡಕವಾಗಿರುವ ಮೌಲ್ಯವನಾಧರಿಸಿ ಸಾರಾಂಶ ಬರೆಯಿರಿ. **1x4=4**

ಕರಿನರೆ ಬಣ್ಣದ ಪುಚ್ಚಗಳುಂಟು
ಬಿಳಿಹೊಳೆ ಬಣ್ಣದ ಗರಿ ಗರಿಯುಂಟು
ಕೆನ್ನನ ಹೊನ್ನನ ಬಣ್ಣಬಣ್ಣಗಳ
ರೆಕ್ಕೆಗಳೆರಡು ಪಕ್ಕದಲ್ಲುಂಟು
ಹಕ್ಕಿಹಾರುತಿದೆ ನೋಡಿದಿರಾ

ಬೇಂದ್ರೆಯವರು ಈ ಪದ್ಯದಲ್ಲಿ ಕಾಲದ ಗುರುತುಗಳನ್ನು ತಿಳಿಸಿದ್ದಾರೆ. ಹಕ್ಕಿಯ ಹಿಂದೆಯಿರುವ ಪುಚ್ಚ ಅಗೋಚರ ಅದು ಕಳೆದುಹೋದ ಭೂತಕಾಲ ಕರಿನರೆ ಬಣ್ಣಕ್ಕೆ ಹೋಲಿಸಿದ್ದಾರೆ. ನೇರವಾಗಿ ಗೋಚರಿಸುವ ಬಿಳಿಹೊಳೆ ಬಣ್ಣದ ಗರಿಗಳು ವರ್ತಮಾನದ ಗುರುತುಗಳು. ಹಾಗೆಯೇ ಕೆಂಪಾಗಿ – ಹೊನ್ನಿನ ಬಣ್ಣಗಳ ರಕ್ಕೆಗಳು ಭವಿಷ್ಯತ್ ಕಾಲದ ಗುರುತುಗಳು. ಹೀಗೆ ಕಾಲವೆಂಬ ಹಕ್ಕಿ ಭೂತ, ವರ್ತಮಾನ, ಭವಿಷ್ಯತ್ ಕಾಲಗಳೆಂಬ ಗುರುತುಗಳನ್ನು ಮೂಡಿಸುತ್ತಾ ಹಾರಿ ಹೋಗುತ್ತಿದೆ ನೋಡಿದಿರಾ ಎಂದು ಅರ್ಥೈಸುತ್ತಾರೆ.

ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ. **1x4=4**

**ನೀಲಮೇಘ ಮಂಡಲ ಸಮಬಣ್ಣ**
**ಮುಗಿಲಿಗೆ ರೆಕ್ಕೆಗಳೊಡೆದವು ಅಣ್ಣ**
**ಚಿಕ್ಕೆಯ ಮಾಲೆಯ ಸಿಕ್ಕಿಸಿಕೊಂಡು**
**ಸೂರ್ಯಚಂದ್ರರನು ಮಾಡಿದೆ ಕಣ್ಣಾ**
**ಹಕ್ಕಿ ಹಾರುತಿದೆ ನೋಡಿದಿರಾ**

ಬೇಂದ್ರೆಯವರು ಈ ಪದ್ಯದಲ್ಲಿ ಕಾಲದ ವಿಶಾಲತೆ ಮತ್ತು ವ್ಯಾಪ್ತಿಯನ್ನು ವಿವರಿಸಿದ್ದಾರೆ ಹಕ್ಕಿಯು ಆಕಾಶ, ಮೋಡ, ಭೂಮಂಡಲಗಳ ಎಲ್ಲಾ ಬಣ್ಣಗಳನ್ನು ಸಮನಾಗಿ ಆವರಿಸಿಕೊಂಡಿದೆ ಅಂದರೆ ಇವುಗಳಲ್ಲಿ ಬೇಧವೆಣಿಸದೆ ಸಮತೆಯನ್ನು ಕಾಣುತಿದೆ. ಹಕ್ಕಿಯ ರಕ್ಕೆಯು ಮೂಡಿದಾಗ ಹೇಗೆ ಹಾರಿಹೋಗುತ್ತದೆಯೋ ಹಾಗೆ ಕಾಲವೆಂಬ ಹಕ್ಕಿ ಮುಗಿಲನ್ನು ರೆಕ್ಕೆ ಮೂಡಿಕೊಂಡು ಅನಂತವಾಗಿ ಹಾರಿಹೋಗುತ್ತಿದೆ ಹೇಗೆಂದರೆ ಚಿಕ್ಕೆಗಳ (ನಕ್ಷತ್ರ) ಮಾಲೆಯನ್ನು ಕೊರಳಿಗೆ ಸಿಕ್ಕಿಸಿಕೊಂಡು ಸೂರ್ಯಚಂದ್ರರನ್ನು ಕಣ್ಣುಗಳನ್ನಾಗಿ ಮಾಡಿಕೊಂಡು ಅನಂತದೆಡೆಗೆ ಹಾರಿಹೋಗಿದೆ ನೋಡಿದಿರಾ ಎಂದು ಹೇಳಿದ್ದಾರೆ.

**ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ.** **1X4=4**

**ರಾಜ್ಯದ ಸಾಮ್ರಾಜ್ಯದ ತೆನೆ ಒಕ್ಕಿ**
**ಮಂಡಲ – ಗಿಂಡಲಗಳ ಗಡಮುಕ್ಕಿ**
**ತೇಲಿಸಿ ಮುಳುಗಿಸಿ ಖಂಡ ಖಂಡಗಳ**
**ಸಾರ್ವಭೌಮರ ನೆತ್ತಿಯ ಕುಕ್ಕಿ**
**ಹಕ್ಕಿ ಹಾರುತಿದೆ ನೋಡಿದಿರಾ !**

ಬೇಂದ್ರೆಯವರು ಈ ಪದ್ಯದಲ್ಲಿ ಕಾಲದ ಸಾರ್ವಭೌಮತ್ವ ವನ್ನು ವಿವರಿಸಿದ್ದಾರೆ. ರಾಜ್ಯ, ಸಾಮ್ರಾಜ್ಯಗಳನ್ನು ವೈಭವದಿಂದ ಮೆರೆಯುವಂತೆ ಮಾಡಿದ್ದು ಇದೇ ಕಾಲ. ಹಾಗೆಯೇ ಅವುಗಳ ನಡುವೆ ತೆನೆಯಲ್ಲಿನ ಕಾಳುಗಳನ್ನು ಬೇರ್ಪಡಿಸುವಂತೆ ಬೇರೆಬೇರೆ ಮಾಡಿದ್ದು ಇದೆ ಕಾಲ. ಹಾಗಾಗಿ ಕಾಲ ಸಾರ್ವಭೌಮತ್ವವನ್ನು ಹೊಂದಿದೆ. ರಾಜ–ಮಹಾರಾಜರ ಸಣ್ಣದೊಡ್ಡ, ಕೋಟೆ–ಕೊತ್ತಲಗಳನ್ನು ಗಬಕ್ಕನೆ ನಾಶಮಾಡಿದ್ದು ಕಾಲವೇ. ವಿಶ್ವದ ಎಲ್ಲಾ ಭಾಗಗಳನ್ನು ಒಂದು ಸಲ ವೈಭವದಿಂದ ಮೆರೆಯುವಂತೆ ಮಾಡಿದ್ದು ಮತ್ತೊಂದು ಸಲ ಮಳುಗುವಂತೆ ಮಾಡಿದೆ. ಹಾಗೆಯೇ ಸಾರ್ವಭೌಮರೆಂದು ಮೆರೆದವರ ನೆತ್ತಿಯ ಮೇಲೆ ಕುಕ್ಕಿ ಕೆಳಗೆ ಬೀಳಿಸಿ ಹೊಸಕಿ ಹಾಕಿ ಹಕ್ಕಿ ಹಾರಿಹೋಗಿದೆ ಎಂದು ಹೇಳುತ್ತಾರೆ.

ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ. **1X4=4**

**ಯುಗಯುಗಗಳ ಹಣೆಬರೆಹವ ಒರೆಸಿ**

**ಮನ್ವಂತರಗಳ ಭಾಗ್ಯವತೆರೆಸಿ**

**ರೆಕ್ಕೆಯ ಬೀಸುತ ಚೇತನಗೊಳಿಸಿ**

**ಹೊಸಗಾಲದ ಹಸು ಮಕ್ಕಳ ಹರಸಿ**

**ಹಕ್ಕಿ ಹಾರುತಿದೆ ನೋಡಿದಿರಾ !**

ಬೇಂದ್ರೆಯವರು ಈ ಪದ್ಯದಲ್ಲಿ ಕಾಲದ ಪರಿವರ್ತನಾ ನಿಯಮ ಹಾಗೂ ಹಾರೈಕೆಯನ್ನು ವಿವರಿಸಿದ್ದಾರೆ.ಕಾಲವು ಯುಗಯುಗಗಳ ಹಣೆಬರೆಹವನ್ನು ,(ಕೆಟ್ಟದ್ದನ್ನು) ಚರಿತ್ರೆಯನ್ನು ಅಳಿಸಿ ಹಾಕಿ ಹೊಸತನವನ್ನು (ಒಳ್ಳೆತನವನ್ನು) ಹೊಸ ಹಣೆಬರೆಹವನ್ನು ಬರೆದು ಎಲ್ಲರಿಗೂ ಬದಲಾವಣೆಯಾಗುವ ಒಳ್ಳೆಯ ಭಾಗ್ಯವನ್ನು ತೆರೆದು ಕೊಟ್ಟಿದೆ. ಹಾಗೆಯೇ ರೆಕ್ಕೆಯ ಬೀಸುತ , ಮೇಲಕ್ಕೆ ಹಾರುತ,ಹಾರುವ ಚೇತನವನ್ನು (ಶಕ್ತಿಯನ್ನು) ನೀಡುತ್ತ , ಈ ಹೊಸಗಾಲದ ಹಸು ಮಕ್ಕಳನ್ನು ಹರಸಿ, ಹಾರೈಸಿ ಬದಲಾವಣೆಯ ಹಾದಿಯನ್ನು ಹಿಡಿದು ಹಕ್ಕಿ ಹಾರಿ ಹೋಗುತ್ತಿದೆ ಎಂದು ಹೇಳುತ್ತಾರೆ.